**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತ) ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

****

**ವಿಷಯ:** ಇಡೀ ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತೀ ಹೆಚ್ಚು ಸಂಖ್ಯೆಯ ಶಾಲಾ-ಕಾಲೇಜುಗಳನ್ನು ಹೊಂದಿರುವ ಹೆಗ್ಗಳಿಕೆಗೆ ಪಾತ್ರವಾಗಿರುವ ಸಿಂಧನೂರು ತಾಲ್ಲೂಕಿನಲ್ಲಿ ವಿದ್ಯಾರ್ಥಿಗಳು ತಾಂತ್ರಿಕ & ಉನ್ನತ ಶಿಕ್ಷಣ ವ್ಯಾಸಾಂಗಕ್ಕೆ ಅಗತ್ಯವಾಗಿರುವ ಸರ್ಕಾರಿ ಡಿಪ್ಲಮೋ ಹಾಗೂ ಇಂಜಿನಿಯರಿಂಗ್ ಕಾಲೇಜುಗಳು ಇಲ್ಲದಿರುವುದರಿಂದ, ತಾಲ್ಲೂಕಿಗೆ ಸರ್ಕಾರಿ ಡಿಪ್ಲಮೋ ಹಾಗೂ ಇಂಜಿನಿಯರಿಂಗ್ ಕಾಲೇಜುಗಳನ್ನು ಮಂಜೂರು ಮಾಡುವ ಕುರಿತು.

---

**ಉತ್ತರ:**

ರಾಜ್ಯದಲ್ಲಿ ಒಟ್ಟು 17 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಮತ್ತು 109 ಸರ್ಕಾರಿ ಪಾಲಿಟೆಕ್ನಿಕ್‌ಗಳು ಕಾರ್ಯನಿರ್ವಹಿಸುತ್ತಿವೆ. ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಸಾಕಷ್ಟು ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಕುರಿತು ನೇಮಕಾತಿ ಬಾಕಿ ಇರುತ್ತದೆ. ಪ್ರಸ್ತುತ ಇರುವ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಕೋರ್ಸ್/ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನದ ಕೊರತೆ ಇರುತ್ತದೆ.

ಉನ್ನತ ಶಿಕ್ಷಣ ಇಲಾಖೆಗೆ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನದಲ್ಲಿ ಅಭಿವೃದ್ಧಿಗಾಗಿ ಸೀಮಿತ ಅನುದಾನ ಲಭ್ಯವಿರುತ್ತದೆ. ಸದರಿ ಅನುದಾನದಲ್ಲಿ ಪ್ರಸ್ತುತ ಇರುವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಬಲವರ್ಧನೆಗೊಳಿಸಲಾಗುತ್ತಿದೆ.

ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಸುತ್ತಮುತ್ತ ಈ ಕೆಳಕಂಡ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ:

| ಕ್ರ ಸಂ. | ಇಂಜಿನಿಯರಿಂಗ್ ಕಾಲೇಜಿನ ಹೆಸರು | ಸಿಂಧನೂರಿನಿಂದ ಇರುವ ಅಂತರ (ಕಿ.ಮೀ.) | ಪ್ರಸ್ತುತ ಲಭ್ಯವಿರುವ ಕೋರ್ಸ್ ಗಳು | ವಿದ್ಯಾರ್ಥಿಗಳ ಸಂಖ್ಯೆ |
|---|---|---|---|---|
| 1. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ | 50 | 05 | 759 |
| 2 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು | 90 | 04 | 755 |

| ಕ್ರ. ಸಂ. | ಪಾಲಿಟೆಕ್ನಿಕ್ ಸಂಸ್ಥೆಯ ಹೆಸರು | ಸಿಂಧನೂರಿನಿಂದ ಇರುವ ಅಂತರ (ಕಿ.ಮೀ.) | ಪ್ರಸ್ತುತ ಲಭ್ಯವಿರುವ ಕೋರ್ಸುಗಳು | ವಿದ್ಯಾರ್ಥಿಗಳ ಸಂಖ್ಯೆ |
|---|---|---|---|---|
| 1 | ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು | 92 | 5 | 719 |
| 2 | ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ | 70 | 4 | 175 |
| 3 | ಸರ್ಕಾರಿ ಪಾಲಿಟೆಕ್ನಿಕ್, ಅರಕೆರ | 90 | 4 | 29 |
| 4 | ಸರ್ಕಾರಿ ಪಾಲಿಟೆಕ್ನಿಕ್, ಲಿಂಗಸಗೂರು | 49 | 5 | 515 |
| 5 | ಸರ್ಕಾರಿ ಪಾಲಿಟೆಕ್ನಿಕ್, ಮಸ್ಕಿ | 27 | 4 | 84 |

ಮೇಲ್ಕಂಡ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಸಿಂಧನೂರು ತಾಲ್ಲೂಕಿನ ವಿದ್ಯಾರ್ಥಿಗಳು ವ್ಯಾಸಂಗ ಮಾಡಬಹುದಾಗಿದೆ.

ರಾಜ್ಯದಲ್ಲಿ ನೂತನ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು ಪರಿಶೀಲಿಸಿ ವರದಿ ನೀಡಲು ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ಸಲ್ಲಿಸಿರುವ ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ.

ಮುಂದುವರೆದು, ನೂತನ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳನ್ನು ಪ್ರಾರಂಭಿಸಬೇಕಿದ್ದಲ್ಲಿ, ಎಐಸಿಟಿಇ ಮಾನದಂಡಗಳನ್ವಯ ನಿವೇಶನ, ಕಟ್ಟಡ ಮೂಲಭೂತ ಸೌಲಭ್ಯಗಳು, ಶೈಕ್ಷಣಿಕ ಮೂಲಭೂತ ಸೌಲಭ್ಯಗಳು, ಬೋಧಕ/ಬೋಧಕೇತರ ಹುದ್ದೆಗಳನ್ನು ಮತ್ತು ಇನ್ನಿತರೇ ಸೌಲಭ್ಯಗಳನ್ನು ಒದಗಿಸಿಕೊಂಡು, ಎಐಸಿಟಿಇ ಯಿಂದ ಅನುಮೋದನೆ ಪಡೆದು ಪ್ರಾರಂಭಿಸಬೇಕಿರುತ್ತದೆ.

ಆದ್ದರಿಂದ, ಪ್ರಸ್ತುತ ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನಲ್ಲಿ ಹೊಸ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ.

ಕಡತ ಸಂಖ್ಯೆ: ಇಡಿ 12 ಹೆಚ್‌ಪಿಟಿ 2026

(ಡಾ|| ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು